# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 896 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 18-12-2018 |
| ಉತ್ತರಿಸಬೇಕಾದ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಈ ಹಿಂದೆ ತುಮಕೂರು ನಗರಕ್ಕೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಮಂಜೂರು ಮಾಡಿರುವುದು ಸರ್ಕಾರದ ಗಮನದಲ್ಲಿದೆಯೇ: | ರಾಜ್ಯದ 2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಸನ್ಮಾನ್ಯ ಮುಖ್ಯ ಮಂತ್ರಿಗಳು, ಆರೋಗ್ಯ ಇಲಾಖೆಯ ಆಯವ್ಯಯ ಘೋಷಣೆಯ ಪ್ಯಾರ 117ರಲ್ಲಿ ತುಮಕೂರಿನಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಸ್ಥಾಪಿಸುವ ಕುರಿತು ಘೋಷಿಸಲಾಯಿತು. |
| ಆ) | ಹಾಗಿದ್ದಲ್ಲಿ, ಈ ಆಸ್ಪತ್ರೆ ನಿರ್ಮಾಣ ಮಾಡುವ ಬಗ್ಗೆ ಇಲ್ಲಿಯವರೆಗೆ ಯಾವ ರೀತಿಯ ಪ್ರಕ್ರಿಯೆಗಳು ಆಗಿವೆ: (ಸಂಪೂರ್ಣ ಮಾಹಿತಿ ನೀಡುವುದು) | ತುಮಕೂರಿನಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಾಗಿ ಸೂಕ್ತ ನಿವೇಶನವನ್ನು ಜಿಲ್ಲಾ ಆಸ್ಪತ್ರೆ, ತುಮಕೂರು ಆವರಣದಲ್ಲಿ 2.18 ಎಕರೆ ಪ್ರದೇಶವನ್ನು ಗುರುತಿಸಲಾಗಿದೆ.<br>ನಂತರದ ಹಂತದಲ್ಲಿ ತುಮಕೂರು ಸ್ಮಾರ್ಟ್ ಸಿಟಿ ಯೋಜನೆಯಡಿಯಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಪಿ.ಪಿ.ಪಿ. ಮಾದರಿಯಲ್ಲಿ ಪ್ರಾರಂಭಿಸುವ ಉದ್ದೇಶಕ್ಕಾಗಿ ಸಾರ್ವಜನಿಕವಾಗಿ ಆಸಕ್ತಿ ವ್ಯಕ್ತಪಡಿಸುವಿಕೆ (EOI) ಪ್ರಕಟಣೆಯನ್ನು ಹೊರಡಿಸಲಾಯಿತು.<br>ಮುಂದುವರೆದು ದಿನಾಂಕ: 27-09-2018 ರಂದು ನಡೆದ 7ನೇ ರಾಜ್ಯ ಮಟ್ಟದ ಹೈ ಪವರ್ ಸ್ಟೀಯರಿಂಗ್ ಕಮಿಟಿ ಸಭೆಯಲ್ಲಿ ಪಿ.ಪಿ.ಪಿ. ಮಾದರಿಯ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಪ್ರಸ್ತಾವನೆಯು ಸೂಕ್ತವಲ್ಲವೆಂದು ತೀರ್ಮಾನಿಸಿ ಪ್ರಸ್ತಾವನೆ ಕೈಬಿಡಲಾಯಿತು.<br>ಮುಂದುವರೆದು, ದಿನಾಂಕ.27.09.2018 ರಂದು ನಡೆದ 7ನೇ **HPSC (High Powered Steering Committee)** ಸಭೆಯಲ್ಲಿ ಮರು ಮಂಡಿಸಲಾಗಿದ್ದು, ಸದರಿ ಸಭೆಯಲ್ಲಿ **"Tumakuru Smart City Limited to Drop the above proposal under PPP and to transfer Rs. 54 crores to Medical Education Department for development of Multi Speciality Hospital with Government funding as convergence project within the District Hospital premises"** ಎಂದು ವಿಶ್ಲೇಷಿಸಿ ಯೋಜನೆಯನ್ನು ಕೈಬಿಡಲು ಸೂಚಿಸಲಾಗಿರುತ್ತದೆ. |
| ಇ) | ಈ ಆಸ್ಪತ್ರೆಯನ್ನು ನಿರ್ಮಾಣ ಮಾಡಲು ಇಲ್ಲಿಯವರೆಗೆ ಎಷ್ಟು ಅನುದಾನವನ್ನು ಸರ್ಕಾರ ಒದಗಿಸಿದೆ: (ವಿವರ ನೀಡುವುದು) | ಅನುದಾನ ಬಿಡುಗಡೆಯಾಗಿರುವುದಿಲ್ಲ. |
| ಈ) | ಸದರಿ ಆಸ್ಪತ್ರೆಯನ್ನು ನಿರ್ಮಾಣ ಮಾಡಲು ಯಾವಾಗ ಕಾಮಗಾರಿಯನ್ನು ಪ್ರಾರಂಭ ಮಾಡಲಾಗುವುದು: ಯಾವ ಸಮಯಕ್ಕೆ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು? (ವಿವರ ನೀಡುವುದು) | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಿವಿಲ್ ಇಂಜಿನಿಯರಿಂಗ್ ವಿಭಾಗದಿಂದ ಸದರಿ ಆಸ್ಪತ್ರೆಯಲ್ಲಿ **Oncology** ಘಟಕ ಹಾಗೂ ಟ್ರಾಮಾಕೇರ್ ನಿರ್ಮಾಣ ಮಾಡಲು ತಗಲುವ ಅಂದಾಜು ಪಟ್ಟಿಯನ್ನು ತಯಾರಿಸಲಾಗುತ್ತಿದೆ. ತದನಂತರ ಕಾಮಗಾರಿ ಪ್ರಕ್ರಿಯೆ ಜಾರಿಗೊಳಿಸಲು ಕ್ರಮವಹಿಸಲಾಗುವುದು. |

ಸಂಖ್ಯೆ: ಆಕುಕ 896 ವಿ.ಪ. 2018

(ಶಿವಾನಂದ ಎಸ್. ಪಾಟೀಲ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು